ಜಿಲ್ಲಾಧಿಕಾರಿಗಳ ಕಾರ್ಯಾಲಯ

ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
ಜಿಲ್ಲಾ ಸಂಕೀರ್ಣ ಬೀರಸಂದ್ರ ಗ್ರಾಮ, ಕುಂದಾಣ ಹೋಬಳಿ,
ದೇವನಹಳ್ಳಿ ತಾಲ್ಲೂಕು–562110
Email-ka.bengaluru.rural.dudc.@gmail.com

ನಂ: ಜಿನಕೋ/ಸಿ(1)/ಪೌ.ನೇ/ಸಿ.ಆರ್/52/2025–26 ದಿನಾಂಕ: 22/07/2026

ಅಧಿಸೂಚನೆ

ಪೌರ ಕಾರ್ಮಿಕರ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ 02/01/2026ರಂದು ಈ ಕಛೇರಿಯಿಂದ ಹೊರಡಿಸಲಾದ ಅಧಿಸೂಚನೆಯನ್ನು ಮಾನ್ಯ ಸರ್ಕಾರದ ಆದೇಶದ ಸಂಖ್ಯೆ ಸಿಆಸುಇ 02 ಸೇಹಿಮ 2026 ಬೆಂಗಳೂರು ದಿನಾಂಕ 13/05/2026ರಂತೆ ರದ್ದುಗೊಳಿಸಲಾಗಿದ್ದು, ಸದರಿ ಮಾನ್ಯ ಸರ್ಕಾರದ ಆದೇಶದಲ್ಲಿ ಸೂಚಿಸಿರುವಂತೆ ಒಳಮೀಸಲಾತಿಯನ್ನು ಅಳವಡಿಸಿಕೊಂಡು ಪರಿಷ್ಕೃತ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಮಂಜೂರಾಗಿರುವ ಹುದ್ದೆಗಳಲ್ಲಿ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳಿಗೆ ವಿಶೇಷ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ನಗರ ಸ್ಥಳೀಯ ಸಂಸ್ಥೆಗಳಲ್ಲಿ ದಿನಾಂಕ: 07.08.2017 ರ ಪೂರ್ವದಲ್ಲಿ ನೇಮಕಾತಿ ಹೊಂದಿ ಹಾಲಿ ಪೌರಕಾರ್ಮಿಕರಾಗಿ ನೇರ ಪಾವತಿಯ ಆಧಾರದಲ್ಲಿ 2 ವರ್ಷಕ್ಕಿಂತ ಕಡಿಮೆ ಇಲ್ಲದೇ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಅರ್ಜಿ ಸಲ್ಲಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿಯೇ ಕಾರ್ಯ ನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳಿಂದ ಮಾತ್ರ ಸದರಿ ಪೌರಕಾರ್ಮಿಕರ ವಿಶೇಷ ನೇಮಕಾತಿ ನಿಯಮಾವಳಿಗಳಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಅರ್ಜಿ ನಮೂನೆಯಲ್ಲಿ ತಿಳಿಸಿರುವ ಎಲ್ಲಾ ಮಾಹಿತಿಗಳನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು ಹಾಗೂ ಅದಕ್ಕೆ ಪೂರಕವಾದ ದಾಖಲೆಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸಿ ನಿಗದಿತ ಅವಧಿಯೊಳಗೆ ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳ ಕಛೇರಿಯಲ್ಲಿ ಸಲ್ಲಿಸತಕ್ಕದ್ದು.

- ನೇಮಕಾತಿಯ ಪೂರ್ಣ ಷರತ್ತು ಹಾಗೂ ನಿಯಮಗಳನ್ನು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ನಾಮಫಲಕದಲ್ಲಿ ಪ್ರಚುರ ಪಡಿಸಲಾಗಿರುತ್ತದೆ.
- 18 ರಿಂದ 55 ರ ವಯೋಮಿತಿ ಒಳಗಿರುವವರು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕಾಲಮಿತಿ ಹಾಗೂ ವಿಳಾಸ:

ವಿವರ	ದಿನಾಂಕ	ಅರ್ಜಿ ನಮೂನೆ/ಪಡೆಯುವ ವಿಳಾಸ
ಅರ್ಜಿ ಸಲ್ಲಿಸಲು ನಿಗಧಿ ಪಡಿಸಿರುವ ಪ್ರಾರಂಭಿಕ ದಿನಾಂಕ	22.07.2026	ಮೇಲ್ಕಂಡಂತೆ ಅರ್ಹರು/ಆಸಕ್ತರು ತಾವು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆ ದೊಡ್ಡಬಳ್ಳಾಪುರ / ಹೊಸಕೋಟೆ / ನೆಲಮಂಗಲ, ಪುರಸಭೆಗಳಾದ ದೇವನಹಳ್ಳಿ / ವಿಜಯಪುರ ಮತ್ತು ಪಟ್ಟಣ ಪಂಚಾಯಿತಿ ಬಾಶೆಟ್ಟಿಹಳ್ಳಿ ಗಳ ಪೌರಾಯುಕ್ತರು / ಮುಖ್ಯಾಧಿಕಾರಿಗಳ ಕಛೇರಿಯಲ್ಲಿ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ನಗರ ಸ್ಥಳೀಯ ಸಂಸ್ಥೆಗಳಿಗೆ ನಿಗಧಿತ ಅವಧಿಯಲ್ಲಿ ಸಲ್ಲಿಸುವುದು.
ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ	24.08.2026	

ಕ್ರ ಸಂ	ನಗರ ಸ್ಥಳೀಯ ಸಂಸ್ಥೆಗಳು ಹೆಸರು	ನೇರ ನೇಮಕಾತಿ ಪೌರ ಕಾರ್ಮಿಕರ ಹುದ್ದೆಗಳ ಸಂಖ್ಯೆ
1	ನಗರಸಭೆ ದೊಡ್ಡಬಳ್ಳಾಪುರ	06
2	ನಗರಸಭೆ ಹೊಸಕೋಟೆ	06
3	ನಗರಸಭೆ ನೆಲಮಂಗಲ	05
4	ಪುರಸಭೆ ದೇವನಹಳ್ಳಿ	03
5	ಪುರಸಭೆ ವಿಜಯಪುರ	03
6	ಪಟ್ಟಣ ಪಂಚಾಯಿತಿ ಬಾಶೆಟ್ಟಿಹಳ್ಳಿ	03

ಸಹಿ/– ಅಧ್ಯಕ್ಷರು
ಪೌರಕಾರ್ಮಿಕರ ನೇರ ನೇಮಕಾತಿ (ವಿಶೇಷ)
ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು,
ಬೆಂಗಳೂರು ಗ್ರಾಮಾಂತರ ಜಿಲ್ಲೆ

DIPR/CP/VCPL/1850/2026-27